ಸೌಮ್ಯತೆಯಿಂದ ವಂಚಿತನಾದವನು ಒಳಿತಿನಿಂದಲೂ ವಂಚಿತನಾಗಿದ್ದಾನೆ

ಜರೀರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ
ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಸೌಮ್ಯತೆಯಿಂದ ವಂಚಿತನಾದವನು ಒಳಿತಿನಿಂದಲೂ ವಂಚಿತನಾಗಿದ್ದಾನೆ."
[صحيح] [رواه مسلم]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಯಾರು ಸೌಮ್ಯತೆಯಿಂದ ವಂಚಿತನಾಗಿದ್ದಾನೋ, ಅಂದರೆ ತನ್ನ ಧಾರ್ಮಿಕ ಮತ್ತು ಲೌಕಿಕ ವಿಷಯಗಳಲ್ಲಿ ಮತ್ತು ಸ್ವತಃ ತನ್ನೊಡನೆ ಹಾಗೂ ಇತರರೊಡನೆ ಮಾಡುವ ವ್ಯವಹಾರಗಳಲ್ಲಿ ಯಾರಿಗೆ ಸೌಮ್ಯವಾಗಿ ವರ್ತಿಸುವುದಿಲ್ಲವೋ ಅವನಿಗೆ ಎಲ್ಲಾ ಒಳಿತುಗಳನ್ನು ತಡೆಯಲಾಗಿದೆ.

https://sunnah.global/hadeeth/kn/show/4939